# ಶ್ರೀರಾಮಕೃಷ್ಣ ಶಾರದಾಶ್ರಮ

ಪೊನ್ನಂಪೇಟೆ –571 216, ಕೊಡಗು ಜಿಲ್ಲೆ ಫೋನ್: 08274–249040

e-mail: srkseva@gmail.com • Web: www.rkmponnampet.org.

## ಆಧ್ಯಾತ್ಮಿಕ ಶಿಬಿರ : 9–10–2014 ರಿಂದ 11–10–2014

ಪೊನ್ನಂಪೇಟೆಯಲ್ಲಿ ನಿರ್ಮಾಣವಾಗಿರುವ ಶ್ರೀರಾಮಕೃಷ್ಣ ವಿಶ್ವಭಾವೈಕ್ಯ ಮಂದಿರದ 5ನೇ ವಾರ್ಷಿಕೋತ್ಸವದ ಪ್ರಯುಕ್ತ, **2014 ಅಕ್ಟೋಬರ್ 9 ರಿಂದ 11 ರವರೆಗೆ,** 3 ದಿನಗಳ ಆಧ್ಯಾತ್ಮಿಕ ಶಿಬಿರವನ್ನು ಆಯೋಜಿಸಲಾಗಿದೆ. ರಾಮಕೃಷ್ಣ ಮಠದ ಹಿರಿಯ ಯತಿಗಳಾದ ಸ್ವಾಮಿ ಜಗದಾತ್ಮಾನಂದಜಿ, ಸ್ವಾಮಿ ರಾಘವೇಶಾನಂದಜಿ, ಸ್ವಾಮಿ ಮುಕ್ತಿದಾನಂದಜಿ ಮತ್ತಿತರರು ಈ ಶಿಬಿರದಲ್ಲಿ ಭಕ್ತರಿಗೆ ಮಾರ್ಗದರ್ಶನ ನೀಡಲಿದ್ದಾರೆ ಮತ್ತು ನಾಡಿನ ಹಲವು ಖ್ಯಾತ ವಾಗ್ಮಿಗಳು ಪ್ರವಚನಗಳನ್ನು ನೀಡಲಿದ್ದಾರೆ. ಸಾಂಸ್ಕೃತಿಕ ಕಾರ್ಯಕ್ರಮಗಳೂ ಆಯೋಜಿತವಾಗಿವೆ.

**ಶಿಬಿರದ ನೋಂದಣಿ ಶುಲ್ಕ**

**ವಸತಿ ರಹಿತ: ರೂ. 600/– ವಸತಿ ಸಹಿತ: ರೂ. 1000/–**

**ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ : 2.10.2014**

(ಅರ್ಜಿಯಲ್ಲಿ ಹೆಸರು, ವಯಸ್ಸು, ವಿಳಾಸ ಮತ್ತು ದೂರವಾಣಿ ಸಂಖ್ಯೆಗಳನ್ನು ನೀಡಬೇಕು.
ನಿಗದಿತ ಅರ್ಜಿಯನ್ನು ಆಶ್ರಮದ ವೆಬ್‌ಸೈಟಿನಿಂದ ಕೂಡ ಪಡೆಯಬಹುದಾಗಿದೆ.)

## ಕರ್ನಾಟಕದಲ್ಲಿ ನಡೆದ ವಿವೇಕಾನಂದ ರಥಯಾತ್ರೆಯ ಸಂಯೋಜಕರು ಮತ್ತು ಸ್ವಯಂಸೇವಕರ ದ್ವಿತೀಯ ಸಮ್ಮೇಳನ

**ದಿನಾಂಕ:** 8–10–014 **ಸಮಯ:** ಬೆಳಗ್ಗೆ 10 ರಿಂದ 4ರ ವರೆಗೆ

ಕರ್ನಾಟಕದಲ್ಲಿ ಅತ್ಯದ್ಭುತವಾಗಿ ವಿವೇಕಾನಂದ ರಥಯಾತ್ರೆ ನಡೆದಿರುವುದು ತಮಗೆಲ್ಲಾ ತಿಳಿದ ವಿಚಾರವಾಗಿದೆ. ಬೆಂಗಳೂರಿನ ಬಸವನಗುಡಿ ರಾಮಕೃಷ್ಣ ಮಠದಲ್ಲಿ ನಡೆದ ಮೊದಲ ಸಮ್ಮೇಳನದಲ್ಲಿ ತೀರ್ಮಾನಿಸಿದಂತೆ, 2ನೇ ಸಮ್ಮೇಳನವನ್ನು ಪೊನ್ನಂಪೇಟೆಯ ಶ್ರೀರಾಮಕೃಷ್ಣ ಶಾರದಾಶ್ರಮದಲ್ಲಿ ರಥಯಾತ್ರೆಯ ರಾಜ್ಯ ಸಂಯೋಜಕರಾದ ಸ್ವಾಮಿ ತ್ಯಾಗೀಶ್ವರಾನಂದಜಿಯವರ ನೇತೃತ್ವದಲ್ಲಿ ನಡೆಸಲಾಗುವುದು. ಸಮ್ಮೇಳನದಲ್ಲಿ ಆಧ್ಯಾತ್ಮಿಕ ಪ್ರವಚನಗಳು, ವಿಚಾರ ಸಂಕಿರಣ, ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ರಥಯಾತ್ರೆಯ ಎಲ್ಲಾ ಸಂಯೋಜಕರು ಮತ್ತು ಸ್ವಯಂಸೇವಕರು ಈ ಸಮ್ಮೇಳನದಲ್ಲಿ ಭಾಗವಹಿಸಬೇಕಾಗಿ ವಿನಂತಿ. ಮೇಲಿನ ಆಧ್ಯಾತ್ಮಿಕ ಶಿಬಿರದಲ್ಲಿ ಭಾಗವಹಿಸುವ ಶಿಬಿರಾರ್ಥಿಗಳೂ ಈ ಸಮ್ಮೇಳನದಲ್ಲಿ ಭಾಗವಹಿಸಬಹುದು. ಭಾಗವಹಿಸುವವರು ದಯವಿಟ್ಟು 2–10–2014ರೊಳಗೆ ಪತ್ರಮುಖೇನ ಅಥವಾ Email ಮುಖಾಂತರ ತಿಳಿಸಬೇಕಾಗಿ ವಿನಂತಿ.

ಈ ಒಂದು ದಿನದ ಸಮ್ಮೇಳನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ.

ಭಕ್ತಾದಿಗಳು ಈ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ದಿವ್ಯತ್ರಯರ ಕೃಪೆಗೆ ಪಾತ್ರರಾಗಬೇಕೆಂದು ಕೋರಲಾಗಿದೆ.

ಭಗವತ್ಸೇವೆಯಲ್ಲಿ ತಮ್ಮವ,

**ಸ್ವಾಮಿ ಬೋಧಸ್ವರೂಪಾನಂದ**
ಅಧ್ಯಕ್ಷರು